# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ 703-2017** **ಸಿ. ಡಬ್ಲ್ಯುಃ 07**

**ಪಿ. ಡಬ್ಲ್ಯುಃ 07**

| | |
|---|---|
| ಸಾಕ್ಷಿದಾರರ ಹೆಸರು<br>ತಂದೆಯ /ಗಂಡನ ಹೆಸರು<br>ವಯಸ್ಸು<br>ಕೆಲಸ<br>ವಾಸ | ಮಂಜುನಾಥ್<br>ಲೇ.ನಾಗಪ್ಪ<br>47 ವರ್ಷ<br>ಮುಖ್ಯ ಪೇದೆ, ಜಯಪುರ ಪೊಲೀಸ್ ಠಾಣೆ<br>ಜಯಪುರ |
| | **ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 03-01-2024** |

**ಮುಖ್ಯ ವಿಚಾರಣೆಃ ಶ್ರೀ ಎಪಿಪಿ ವಕೀಲರಿಂದಃ**

ನಾನು 2016 ರಿಂದ ಜುಲೈ-2023 ರವರೆಗೆ ನಂಜನಗೂಡಿನ ಪಟ್ಟಣ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿ.03-04-2017 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಚಾಸಾ-1 ರವರು ರಾತ್ರಿ 11.15 ಗಂಟೆ ಸಮಯದಲ್ಲಿ ನೀಡಿದ ಲಿಖಿತ ದೂರು ಅನ್ನು ಸ್ವೀಕರಿಸಿ ಎನ್.ಸಿ.ಆರ್.ಸಂ.47/2017 ಪ್ರಕರಣವನ್ನು ದಾಖಲು ಮಾಡಿಕೊಂಡಿರುತ್ತೇನೆ. ಸಾಕ್ಷಿಯು ಸ್ವೀಕೃತಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-10 ಎಂದು ಸಾಕ್ಷಿ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-7 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ನಿಪಿ-7(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮಹಜರ್ ಅನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಎಫ್) ಎಂದು ಗುರುತಿಸಲಾಯಿತು. ಅದೇ ದಿನ ಮಹಜರ್ ಕಾಲದಲ್ಲಿ ಅಮಾನತ್ತು ಪಡಿಸಿಕೊಂಡು ಕೆಎ-25-ಎಎ-4565 ಬುಲೇರೋ ಪಿಕ್‌ಅಫ್ ವಾಹನ ಹಾಗೂ ರೂ.500/- ಮುಖಬೆಲೆಯ ಒಟ್ಟು 10 ಬಂಡಲ್‌ಗಳು ಒಟ್ಟು ರೂ.20,00,000/- ನಗದನ್ನು ಮಾಲು ಪಟ್ಟಿ ಸಂ.46/17 ರಂತೆ

ಅಳವಡಿಸಿ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ನಂತರ ಸದರಿ ಪ್ರಕರಣವು ಅಸಂಜ್ಞೆಯ ಪ್ರಕರಣವಾದ್ದರಿಂದ ಪ್ರಕರಣವನ್ನು ದಾಖಲಿಸಲುೀ ಅನುಮತಿ ಕೋರಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ಈ ಪ್ರಕರಣದಲ್ಲಿ ಅಮಾನತ್ತು ಪಡಿಸಿಕೊಂಡ ವಾಹನ, ಕಬ್ಬಿಣದ ಪೆಟ್ಟಿಗೆ ಮತ್ತು ಹಣದ ಬಂಡಲ್‌ಗಳ ಭಾವಚಿತ್ರಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಈಗಾಗಲೇ ನಿಪಿ–2 ರಿಂದ 6 ಎಂದು ಗುರುತಿಸಲಾಗಿರುತ್ತದೆ. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ–8 ರವರಿಗೆ ನೀಡಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿಗಳ ಶ್ರೀ ಎನ್.ಜಿ.ಬಿ ವಕೀಲರಿಂದಃ–</u>**

ಘಟನೆ ಬಗ್ಗೆ ಗ್ರಾಮಾಂತರ ಪೊಲೀಸರಿಗೆ ತಿಳುವಳಿಕೆ ಇತ್ತೆ ಇಲ್ಲವೇ ಎಂದು ನಾನು ತಿಳಿದುಕೊಂಡಿರುವುದಿಲ್ಲ. ಈ ಪ್ರಕರಣದ ಪ್ರಶ್ನಿತ ವಾಹನವನ್ನು ಪೊಲೀಸರು ನಂಜನಗೂಡಿನ ಗ್ರಾಮಾಂತರ ಪೊಲೀಸ್ ಠಾಣೆಯ ಮುಂಭಾಗವೇ ವಶಕ್ಕೆ ಪಡೆಯಲಾಯಿತು ಎಂಬುದರ ಬಗ್ಗೆ ನನಗೆ ಮಾಹಿತಿ ಇರುತ್ತದೆ. ಸದರಿ ಸಮಯದಲ್ಲಿ ನಮ್ಮ ಠಾಣಾ ವರಿಷ್ಠಾಧಿಕಾರಿಗಳು ಹಾಜರಿದ್ದರೇ ಇಲ್ಲವೇ ಎಂಬುದರ ಬಗ್ಗೆ ನನಗೆ ಮಾಹಿತಿ ಇರುವುದಿಲ್ಲ. ಈ ಪ್ರಕರಣವನ್ನು ದಾಖಲಿಸುವ ಪೂರ್ವದಲ್ಲಿ ಪೋಟೋ ಮತ್ತು ವಿಡಿಯೋವನ್ನು ವಿಚಕ್ಷಣ ದಳದವರು ನಮ್ಮ ಠಾಣೆಗೆ ನೀಡಿರಲಿಲ್ಲ. ಚಾಸಾ–1 ರವರು ಹಾಜರುಪಡಿಸಿರು ಮಹಜರ್ ನೈಜತೆಯಿಂದ ಕೂಡಿಲ್ಲದೇ ಇದ್ದರೂ ಸಹ ಚಾಸಾ–1 ರವರು ನೀಡಿರುವ ದೂರು ಮತ್ತು ಮಹಜರ್ ಅನ್ನು ಸ್ವೀಕರಿಸಿ ಆರೋಪಿಗಳ ವಿರುದ್ಧ ಸುಳ್ಳು ಎನ್.ಸಿ.ಆರ್ ಅನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**